**All India Radio: Bangalore**
**Regional Bulletin In Kannada**
**13.08.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.08.2025 / 6.40 p.m.**

**<><><><>**

ಮುಖ್ಯಾಂಶಗಳು

- ವಿಧಾನಸಭೆಯಲ್ಲಿ ರಸಗೊಬ್ಬರ ಅಭಾವ ಕುರಿತ ಚರ್ಚೆ - ಆಡಳಿತ, ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿ
- ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕ ೨೦೨೫ ಸೇರಿದಂತೆ ಹಲವು ವಿಧೇಯಕಗಳಿಗೆ ಕೆಳಮನೆಯಲ್ಲಿ ಧ್ವನಿ ಮತದ ಮೂಲಕ ಅಂಗೀಕಾರ
- ವಿದೇಶಗಳಲ್ಲಿ ವ್ಯಾಸಂಗ ಮಾಡುವವರಿಗೆ ಸರ್ಕಾರದಿಂದ ಇದೇ ಭಾನುವಾರ ವಿಶೇಷ ಅಧ್ಯಯನ ಮೇಳ
- ಬೆಸ್ಕಾಂ ಸ್ಮಾರ್ಟ್ ಮೀಟರ್ ಅಳವಡಿಕೆ ಕಡ್ಡಾಯ ಪ್ರಶ್ನಿಸಿದ್ದ ರಿಟ್ ಅರ್ಜಿ ವಜಾಗೊಳಿಸಿದ ಉಚ್ಚ ನ್ಯಾಯಾಲಯ
- ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆಗೆ ಸಿದ್ಧತೆ; ಪಾಲಿಕೆ ಅಧಿಕಾರಿಗಳಿಂದ ಪರಿಶೀಲನೆ

<><><><>

ವಿಧಾನಸಭೆಯಲ್ಲಿಂದು ರಸಗೊಬ್ಬರ ಅಭಾವ ಕುರಿತಂತೆ ನಡೆದ ಚರ್ಚೆ ಆಡಳಿತ ಹಾಗೂ ಪ್ರತಿಪಕ್ಷಗಳ ನಡುವಿನ ಗದ್ದಲಕ್ಕೆ ಕಾರಣವಾಯಿತು. ಬಿಜೆಪಿಯ ಆರಗ ಜ್ಞಾನೇಂದ್ರ ವಿಷಯ ಪ್ರಸ್ತಾಪಿಸಿ, ಸರ್ಕಾರ ರಸಗೊಬ್ಬರ ಪೂರೈಕೆಗೆ ಏಪ್ರಿಲ್‌ನಿಂದಲೇ ತಯಾರಾಗಬೇಕಿತ್ತು ಎಂದು ಹೇಳಿದರು. ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ್ ಮಾತನಾಡಿ, ರಾಜ್ಯದ ರಸಗೊಬ್ಬರ ನೆರೆಯ ಕೇರಳಕ್ಕೆ ಕಳ್ಳಸಾಗಾಣಿಕೆಯಾಗುತ್ತಿರುವುದನ್ನು ಅಧಿಕಾರಿಗಳು ಪತ್ತೆ ಮಾಡಿದ್ದಾರೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ೯.೭೦ ಲಕ್ಷ ಮೆಟ್ರಿಕ್ ಟನ್ ಗೊಬ್ಬರ ಪೂರೈಸಿದೆ ಎಂದು ತಿಳಿಸಿದರು. ಈ ವೇಳೆ ಕೃಷಿ ಸಚಿವ ಚಲುವರಾಯಸ್ವಾಮಿ ತಪ್ಪು ಮಾಹಿತಿ ನೀಡಬೇಡಿ. ರಾಜ್ಯ ಸರ್ಕಾರ ೧೨ ಲಕ್ಷ ಮೆಟ್ರಿಕ್ ಟನ್ ಗೊಬ್ಬರ ಪೂರೈಕೆಗೆ ಬೇಡಿಕೆಯ ಪ್ರಸ್ತಾವನೆ ಸಲ್ಲಿಸಿತ್ತು ಎಂದು

ಸದನಕ್ಕೆ ತಿಳಿಸಿದರು. ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷದ ನಡುವೆ ಮಾತಿನ ಚಕಮಕಿ ನಡೆದು, ಸದನವನ್ನು ಕೆಲಕಾಲ ಮುಂದೂಡಲಾಯಿತು.

<><><><>

ವಿಧಾನಸಭೆಯಲ್ಲಿಂದು ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರ ಅಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಪರವಾಗಿ ಸಚಿವ ಪ್ರಿಯಾಂಕ್ ಖರ್ಗೆ, ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕ ೨೦೨೫ ಪರ್ಯಾಲೋಚನೆಗೆ ಮಂಡಿಸಿ, ಅಂಗೀಕಾರಕ್ಕೆ ಮನವಿ ಮಾಡಿದರು. ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಕಂದಾಯ ಸಚಿವರ ಪರವಾಗಿ ಸಚಿವ ಪ್ರಿಯಾಂಕ್ ಖರ್ಗೆ ಪರ್ಯಾಲೋಚನೆಗೆ ಮಂಡಿಸಿ, ಅಂಗೀಕಾರಕ್ಕೆ ಮನವಿ ಮಾಡಿದರು. ನಂತರದಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ವಿಧೇಯಕ ಸೇರಿದಂತೆ ಹಲವು ವಿಧೇಯಕಗಳನ್ನು ಪ್ರತ್ಯೇಕವಾಗಿ ಪರ್ಯಾಲೋಚನೆಗೆ ಮಂಡಿಸಿ, ಅಂಗೀಕಾರಕ್ಕೆ ಮನವಿ ಮಾಡಿದರು. ಆಡಳಿತ ಹಾಗೂ ಪ್ರತಿಪಕ್ಷದ ಸದಸ್ಯರ ಚರ್ಚೆಯ ಬಳಿಕ ಧ್ವನಿ ಮತದ ಮೂಲಕ ಎಲ್ಲಾ ವಿಧೇಯಕ ಅಂಗೀಕಾರವಾಗಿದೆ ಎಂದು ಸಭಾಧ್ಯಕ್ಷರು ಪ್ರಕಟಿಸಿದರು.

<><><><>

ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಅಪಘಾತಗಳ ಸಂಖ್ಯೆ ಕಡಿಮೆಯಾಗುತ್ತಿದ್ದು ಈ ಪ್ರಮಾಣವನ್ನು ಇನ್ನೂ ಕಡಿಮೆ ಮಾಡಲು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ನಡೆಯುತ್ತಿವೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ಬಿಜೆಪಿ ಸದಸ್ಯ ಕೆ.ಎಸ್.ನವೀನ್ ಪ್ರಶ್ನೆಗೆ ಉತ್ತರಿಸಿದ ಸಚಿವರು ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಜೀವಕಳೆದುಕೊಳ್ಳುತ್ತಿದ್ದು ಹೆಲ್ಮೆಟ್ ರಹಿತ ಚಾಲನೆ, ಮದ್ಯಪಾನ ಸೇವಿಸಿ ಚಾಲನೆ ಮಾಡುವುದು, ವೀಲ್ಲಿಂಗ್ ಮಾಡುವುದರಿಂದ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲೇ ಅತಿ ಹೆಚ್ಚಿನ ಟ್ರಾಕ್ಟರ್ ಗಳು ಹುಬ್ಬಳ್ಳಿ-ಧಾರವಾಡದಲ್ಲಿದ್ದು ಬಹಳಷ್ಟು ಚಾಲಕರಿಗೆ ಲೈಸೆನ್ಸ್ ಇಲ್ಲದಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಉಚಿತವಾಗಿ ಲೈಸೆನ್ಸ್ ನೀಡುವಂತೆ ಆ ಜಿಲ್ಲೆಯ ಆರ್‌ಟಿಓಗಳಿಗೆ ಸೂಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯ ಸರ್ಕಾರದ ಕೌಶಲ್ಯ ಅಭಿವೃದ್ಧಿ ಇಲಾಖೆಯ ಅಡಿಯ ಕರ್ನಾಟಕ ವೃತ್ತಿಪರ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮ ಇದೇ ಭಾನುವಾರ ಬೆಂಗಳೂರಿನ ಖಾಸಗಿ ಹೊಟೇಲ್‌ನಲ್ಲಿ ವಿದೇಶದಲ್ಲಿ ಅಧ್ಯಯನ ಮೇಳ-೨೦೨೫ ಆಯೋಜಿಸಿದೆ. ಮೇಳದಲ್ಲಿ ೫೦ಕ್ಕೂ ಹೆಚ್ಚು ಪ್ರಮುಖ ಜಾಗತಿಕ

ವಿಶ್ವವಿದ್ಯಾಲಯಗಳು ಭಾಗವಹಿಸಲಿವೆ. ಈ ಕುರಿತಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮಾತನಾಡಿ, ಸಮಾಜದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಅಧ್ಯಯನ ಮಾಡುವ ಅವಕಾಶವನ್ನು ಒದಗಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ರಾಜ್ಯದಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆ ಟೆಂಡರ್‌ನಲ್ಲಿ ಅಕ್ರಮ ನಡೆದಿರುವ ಆರೋಪ ಸಂಬಂಧ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ನಿರ್ದೇಶಿಸಿದ್ದ ಬೆಂಗಳೂರು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಆದೇಶಕ್ಕೆ ಉಚ್ಚ ನ್ಯಾಯಾಲಯ ತಡೆಯಾಜ್ಞೆ ನೀಡಿದೆ. ಮತ್ತೊಂದೆಡೆ, ಬೆಸ್ಕಾಂ ಸ್ಮಾರ್ಟ್ ಮೀಟರ್ ಕಡ್ಡಾಯ ಪ್ರಶ್ನಿಸಿದ್ದ ರಿಟ್ ಅರ್ಜಿಯನ್ನು ಉಚ್ಚ ನ್ಯಾಯಾಲಯ ವಜಾಗೊಳಿಸಿದೆ. ಹಳೆಯ ಮೀಟರ್ ಬದಲಿಸುವುದಿಲ್ಲವೆಂದು ಅಡ್ವೋಕೇಟ್ ಜನರಲ್ ನ್ಯಾಯಾಲಯಕ್ಕೆ ಈಗಾಗಲೇ ಹೇಳಿಕೆ ನೀಡಿದ್ದಾರೆ. ವಿಭಾಗೀಯ ಪೀಠದಲ್ಲಿ ಈ ವಿಚಾರಕ್ಕೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲಾಗಿದೆ ಎಂದು ಹೇಳಿ ರಿಟ್ ಅರ್ಜಿಯನ್ನು ವಜಾಗೊಳಿಸಿ ನ್ಯಾಯಾಲಯ ಆದೇಶ ನೀಡಿದೆ.

<><><><>

ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ನಡೆಯುವ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಕಾರ್ಯಕ್ರಮ ವೀಕ್ಷಿಸಲು ಇ-ಪಾಸ್ ವ್ಯವಸ್ಥೆ ಬಳಸಿಕೊಳ್ಳುವಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಎಂ. ತಿಳಿಸಿದ್ದಾರೆ. ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಇಂದು ಸ್ವಾತಂತ್ರ್ಯೋತ್ಸವ ದಿನಾಚರಣೆಯ ರಾಜ್ಯಮಟ್ಟದ ಸಮಾರಂಭದ ಸಿದ್ಧತೆಗಳ ಕುರಿತು ಮಾತನಾಡಿದ ಅವರು, ಆಗಸ್ಟ್ ೧೫ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ೯ ಗಂಟೆಗೆ ರಾಷ್ಟ್ರ ಧ್ವಜಾರೋಹಣ ಮಾಡಲಿದ್ದಾರೆ. ಧ್ವಜಾರೋಣದ ನಂತರ ಮುಖ್ಯಮಂತ್ರಿಗಳು ತೆರೆದ ಜೀಪಿನಲ್ಲಿ ಪೆರೇಡ್ ಪರಿವೀಕ್ಷಣೆ ಮತ್ತು ಗೌರವ ರಕ್ಷೆ ಸ್ವೀಕರಿಸಲಿದ್ದಾರೆ. ಬಳಿಕ ಜನತೆಗೆ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಸಂದೇಶ ನೀಡಲಿದ್ದಾರೆ. ಪಂಥಸಂಚಲನದಲ್ಲಿ ಕೆ.ಎಸ್.ಆರ್.ಪಿ, ಸಿ.ಆರ್.ಪಿ.ಎಫ್, ಬಿ.ಎಸ್.ಎಫ್, ಹಾಗೂ ಶಾಲಾ ಮಕ್ಕಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ. ಬೆಂಗಳೂರು ನಗರದ ಪೊಲೀಸ್ ಆಯುಕ್ತ ಸಿಮಂತ್ ಕುಮಾರ್ ಸಿಂಗ್ ಮಾತನಾಡಿ, ಸಮಾರಂಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಬೆಂಗಳೂರು ನಗರದ ಎಲ್ಲಾ ವಿಭಾಗಗಳಿಂದ ಒಟ್ಟು ೨ ಸಾವಿರ

ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

೨೦೨೫ನೇ ಸಾಲಿನ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ರಾಷ್ಟ್ರಪ್ರೇಮವನ್ನು ಅಭಿವ್ಯಕ್ತಿಗೊಳಿಸಲು ರಾಮನಗರ ಜಿಲ್ಲೆಯ ಪ್ರತಿಯೊಂದು ಮನೆ-ಮನೆಯಲ್ಲಿಯೂ ಆಗಸ್ಟ್ ೧೫ ರವರೆಗೆ ರಾಷ್ಟ್ರಧ್ವಜವನ್ನು ಹಾರಿಸುವಂತೆ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಕರೆ ನೀಡಿದ್ದಾರೆ. ಸ್ವಾತಂತ್ರ್ಯ ದಿನೋತ್ಸವವನ್ನು ಎಲ್ಲರೂ ತಮ್ಮ ಮನೆ, ಕಚೇರಿ ಕಟ್ಟಡಗಳ ಮೇಲೆ ಗೌರವಪೂರ್ವಕವಾಗಿ ರಾಷ್ಟ್ರಧ್ವಜ ಹಾರಿಸಬೇಕು ಎಂಬ ಆಶಯದಿಂದ ಹರ್‌ಘರ್ ತಿರಂಗ ಅಭಿಯಾನದಡಿಯಲ್ಲಿ ತುಮಕೂರು ಜಿಲ್ಲಾ ಬಿಜೆಪಿಯಿಂದ ಸಾರ್ವಜನಿಕರಿಗೆ ಉಚಿತವಾಗಿ ತ್ರಿವರ್ಣಧ್ವಜ ವಿತರಣೆ ಮಾಡಲಾಯಿತು. ಇನ್ನೊಂದೆಡೆ ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ಬಾಗಲಕೋಟೆಯಲ್ಲಿ ಬಿಜೆಪಿ ತಿರಂಗಾ ಬೈಕ್ ರ‍್ಯಾಲಿ ನಡೆಸಿತು. ದೇಶದ ಎಲ್ಲ ಪ್ರಜೆಗಳು ತಮ್ಮ ಮನೆ ಮುಂದೆ ರಾಷ್ಟ್ರ ಧ್ವಜಾರೋಹಣ ನಡೆಸಬೇಕು. ಖಾದಿ ಧ್ವಜಗಳಿಗೆ ಆದ್ಯತೆ ನೀಡಬೇಕು ಎಂದು ಬಿಜೆಪಿ ರಾಜ್ಯ ವಕ್ತಾರ ಹರಿಪ್ರಕಾಶ್ ಕೋಣೆಮನೆ ಮಂಗಳೂರಿನಲ್ಲಿ ತಿಳಿಸಿದ್ದಾರೆ. ಹುಬ್ಬಳ್ಳಿ-ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರದ ಬಿಜೆಪಿ ಯುವ ಮೋರ್ಚಾ ವತಿಯಿಂದ ಸ್ವಾತಂತ್ರ್ಯೋತ್ಸವದ ಅಂಗವಾಗಿ 'ತಿರಂಗಾ ನಡಿಗೆ' ಜರುಗಿತು.

<><><>

೭೯ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ, ಮದ್ರಾಸ್ ಎಂಜಿನಿಯರ್ ಗ್ರೂಪ್ ಮತ್ತು ಕರ್ನಾಟಕ ಮತ್ತು ಕೇರಳ ಉಪ ಪ್ರದೇಶದ ಕೇಂದ್ರವು ಆಗಸ್ಟ್ ೧೫ರಂದು ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಮಿಲಿಟರಿ ಬ್ಯಾಂಡ್ ಪ್ರದರ್ಶನ ಪ್ರಸ್ತುತಪಡಿಸಲಿದೆ. ಈ ಕಾರ್ಯಕ್ರಮವು ಭಾರತದ ಸಶಸ್ತ್ರ ಪಡೆಗಳ ಧೈರ್ಯ, ಶಿಸ್ತು ಮತ್ತು ಶೌರ್ಯವನ್ನು ಪ್ರತಿಧ್ವನಿಸುವ ಪ್ರತಿಧ್ವನಿಯೊಂದಿಗೆ ದೇಶಭಕ್ತಿ ಗೀತೆಗಳನ್ನು ನುಡಿಸಲಿದೆ. ಎಲ್ಲರೂ ಭಾಗಿಯಾಗುವಂತೆ ತೋಟಗಾರಿಕಾ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ಧರ್ಮಸ್ಥಳ ಪೊಲೀಸ್ ಠಾಣಾ ವ್ಯಾಪ್ತಿಯ ಹಲವು ಕಡೆ ಮೃತದೇಹಗಳನ್ನು ಹೂತು ಹಾಕಲಾಗಿದೆ ಎನ್ನುವ ಪ್ರಕರಣದ ಎಸ್‌ಐಟಿ ತನಿಖೆ ಮುಂದುವರಿದಿದ್ದು, ಇಂದು ಸಾಕ್ಷಿ ದೂರುದಾರ ಗುರುತಿಸಿದ ೧೩ನೇ ಸ್ಥಳದಲ್ಲಿ ಶೋಧ ಕಾರ್ಯ ನಡೆಯುತ್ತಿದೆ. ಮಳೆಯ ನಡುವೆಯೇ ಎರಡು ಹಿಟಾಚಿಯನ್ನು

ಬಳಸಿ ಎಸ್‌ಐಟಿ ತಂಡದಿಂದ ಶೋಧ ಕಾರ್ಯ ನಡೆಯುತ್ತಿದೆ. ಈ ನಡುವೆ ಇಂದು ಮತ್ತೆ ಇಬ್ಬರು ದೂರುದಾರರು ಎಸ್‌ಐಟಿ ಮುಂದೆ ಹಾಜರಾಗಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ದೂರುದಾರ ಪುರಂದರ ಗೌಡ ನೇತ್ರಾವತಿ ಸ್ನಾನಘಟ್ಟದಲ್ಲಿ ತಮ್ಮ ಅಂಗಡಿಯಿತ್ತು. ತಾವೂ ಕೂಡ ಮೃತದೇಹಗಳನ್ನು ಹೂತು ಹಾಕುವುದನ್ನು ನೋಡಿದ್ದು, ಒಂದಕ್ಕಿಂತ ಹೆಚ್ಚು ಜನರು ಸೇರಿ ಮೃತದೇಹಗಳನ್ನು ಹೂತು ಹಾಕುತ್ತಿದ್ದರು ಎಂದು ತಿಳಿಸಿದ್ದಾರೆ. ಮತ್ತೋರ್ವ ವ್ಯಕ್ತಿ ತಾನು ಸಾಕ್ಷಿದೂರುದಾರ ತೋರಿಸಿದ ಸ್ಥಳವಲ್ಲದೆ ಬೇರೆ ಸ್ಥಳಗಳಲ್ಲಿ ಮೃತದೇಹಗಳನ್ನು ಹೂತು ಹಾಕಿರುವುದನ್ನು ನೋಡಿದ್ದು, ಈ ಬಗ್ಗೆ ಎಸ್‌ಐಟಿ ಮುಂದೆ ಹೆಚ್ಚಿನ ಮಾಹಿತಿ ನೀಡುವುದಾಗಿ ಹೇಳಿದ್ದಾರೆ.

<><><><>

ಮಾದಕ ವಸ್ತುಗಳ ಸೇವನೆ ದೇಶದ ಅಭಿವೃದ್ಧಿಗೆ ಎದುರಾಗಿರುವ ಅತಿ ದೊಡ್ಡ ಸಮಸ್ಯೆಯಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಮಿಮ್ಸ್ ಸಭಾಂಗಣದಲ್ಲಿಂದು ಜಿಲ್ಲಾ ಪೋಲಿಸ್ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ "ನಶೆಮುಕ್ತ ಭಾರತ ಅಭಿಯಾನ-೨೦೨೫" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ತಮ್ಮೆಲ್ಲರ ಮೇಲಿರುವ ಅತಿ ದೊಡ್ಡ ಸಾಮಾಜಿಕ ಜವಾಬ್ದಾರಿ ಎಂದರೆ ಮಾದಕ ವಸ್ತುಗಳನ್ನು ಯುವ ಜನತೆ ಸೇವನೆ ಮಾಡದಂತೆ ನೋಡಿಕೊಳ್ಳುವುದು ಹಾಗೂ ಮಾದಕ ವ್ಯಸನಿಗಳನ್ನು ಸರಿ ದಾರಿ ತರುವುದಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>